**ಒ.ಎಸ್.ನಂ. 375/2024**
**ಪಿ. ಡಬ್ಲೂ-1**

**ದಿನಾಂಕಃ 10.08.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ಮಾಡಿಸಲಾಯಿತು.**

**ಪಾಟೀ ಸವಾಲು :- ಪ್ರತಿವಾದಿ ಪರ ವಕೀಲರಿಂದಃ-**

**1.** ಏನು ಪರಿಹಾರ ಕೋರಿ ದಾವೆ ಸಲ್ಲಿಸಿದ್ದೀರಾ ಎಂದರೆ ತಿರುಗಾಡಲು ರಸ್ತೆ ಇಲ್ಲ ಎಂದು ದಾವೆ ಸಲ್ಲಿಸಿದ್ದೇನೆ ಎಂದು ನುಡಿಯುತ್ತಾರೆ. ದಾವಾ ಸ್ವತ್ತಿನ ಅಕ್ಕ ಪಕ್ಕ ಪ್ರತಿವಾದಿಗಳ ಜಮೀನು ಇರುತ್ತವೆ ಎಂದರೆ ಸರಿ. ದಾವಾಸ್ತಿಯಲ್ಲಿ ಸರ್ವೆ ನಂಬರ್ 47 ರಲ್ಲಿ 1 ಎಕರೆ 20 ಗುಂಟೆ ಇದ್ದು, ದುರಸ್ಥಿಯಾದ ನಂತರ 1 ಎಕರೆ 10 ಗುಂಟೆ ಆಗಿರುತ್ತದೆ ಎಂದು ನುಡಿಯುತ್ತಾರೆ. ಸದರಿ ಜಮೀನು 1995 ರಲ್ಲಿ ಮಂಜೂರಾಗಿರುತ್ತದೆ. ಸುಮಾರು 35 ವರ್ಷಗಳಿಂದ ಸದರಿ ಜಮೀನಿನಲ್ಲಿ ವ್ಯವಸಾಯ ಮಾಡುತ್ತಿದ್ದೇನೆ. ದಾವಾ ಸ್ವತ್ತಿನ ಪಶ್ಚಿಮಕ್ಕೆ ಪ್ರತಿವಾದಿ 2 ರವರ ಜಮೀನು ಇದೆ ಎಂದರೆ ಸರಿ. ಪ್ರತಿವಾದಿ 2 ರವರಿಗೆ ಎಷ್ಟು ಎಕರೆ ಜಮೀನು ಇರುತ್ತದೆ ಎಂದು ಗೊತ್ತಿಲ್ಲ. ಪ್ರತಿವಾದಿಗಳೂ ಸಹ 35 ವರ್ಷಗಳಿಂದ ವ್ಯವಸಾಯ ಮಾಡುತ್ತಿದ್ದಾರೆ ಎಂದರೆ ಸರಿ. ನನ್ನ ಜಮೀನಿಗೆ ಹೋಗಲ ಪ್ರತಿವಾದಿ 1 ಮತ್ತು 2 ರವರ ಜಮೀನಿನ ಮೂಲಕ ಓಡಾಡುತ್ತಿದ್ದೆ. ಈಗ 8 ವರ್ಷಗಳಿಂದ ಪ್ರತಿವಾದಿ 1 ಮತ್ತು 2 ರವರು ನಮ್ಮ ಜಮೀನಿಗೆ ಹೋಗಲು ರಸ್ತೆ ಬಿಡುತ್ತಿಲ್ಲ. ದಾವಾ ಸ್ವತ್ತಿನಲ್ಲಿ ಈಗ ಹತ್ತಿ ಬೆಳೆದಿರುತ್ತೇನೆ. ರಸ್ತೆಯ ಸಲುವಾಗಿ ತಹಶೀಲ್ದಾರ್ ರವರಿಗೆ ಅರ್ಜಿ ಸಲ್ಲಿಸಿರುತ್ತೇನೆ. ಸದರಿ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಆರೀತಿ ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳು ತೊಂದರೆ ಕೋಡುವ ಬಗ್ಗೆ ಪೋಲೀಸ್ ದೂರು ಕೊಟ್ಟಿರುತ್ತೇನೆ. ಯಾವ ದಿನಾಂಕ ದೂರು ಕೊಟ್ಟಿರುತ್ತೀರಾ ಎಂದರೆ ನೆನಪಿಲ್ಲ ಎಂದುನುಡಿಯುತ್ತಾರೆ. ಪ್ರತಿವಾದಿಗಳು ಯಾವುದೇ ತರಹದ ತೊಂದರೆ ಕೊಟ್ಟಿಲ್ಲ, ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದೂರು ಕೊಟ್ಟಿರುವ ಬಗ್ಗೆ ದಾಖಲೆ ಹಾಜರುಪಡಿಸಿಲ್ಲ. ರಸ್ತೆ ಬಿಡಿಸಿಕೊಡುವಂತೆ ನ್ಯಾಯಾಲಯದಲ್ಲಿ ದಾವೆ ಸಲ್ಲಿಸಿದ್ದೀರಾ ಎಂದರೆ ಇಲ್ಲ ಎಂದು ನುಡಿಯುತ್ತಾರೆ. ಪ್ರತಿವಾದಿಗಳು ತೊಂದರೆ

ಕೊಡದೇ ಇದ್ದರೂ ನ್ಯಾಯಾಲಯದಲ್ಲಿ ಸುಳ್ಳು ದಾವೆ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ನನಗೆ ತಿರುಗಾಡಲು ರಸ್ತೆ ಇದ್ದು, ಸುಮಾರು 30-40 ವರ್ಷಗಳಿಂದ ಅದೇ ರಸ್ತೆಯಲ್ಲಿ ಓಡಾಡುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳಿಗೆ ತೊಂದರೆ ಕೊಡಲು ಸುಳ್ಳು ದಾವೆ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮುಂದುವರಿದ ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದು, ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು)

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹೆಚ್.ಡಿ. ಕೋಟೆ.**